# ಕರ್ನಾಟಕ ಸರ್ಕಾರ

ಸಂಖ್ಯೆ: ಇಪಿ 244 ಎಸ್‌ಎಲ್‌ಬಿ 2025

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:15.10.2025

## ಅಧಿಸೂಚನೆ

1983 ರ ಕರ್ನಾಟಕ ಶಿಕ್ಷಣ ಕಾಯ್ದೆಯ (1995ರ ಕರ್ನಾಟಕ ಕಾಯ್ದೆ-1) ಸೆಕ್ಷನ್ 7ರ ಉಪವಿಭಾಗ (1) ರ ಷರತ್ತು (i) ಮತ್ತು ಸೆಕ್ಷನ್ 145 ರ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಪ್ರಸ್ತಾಪಿಸಿರುವ ಅಧಿಸೂಚನೆ ಸಂಖ್ಯೆ:ಇಪಿ 244 ಎಸ್‌ಎಲ್‌ಬಿ 2025, ದಿನಾಂಕ:24.07.2025 ರಲ್ಲಿ ಪ್ರಕಟಿಸಿರುವ ಕರಡು ಅಧಿಸೂಚನೆಯನ್ನು ಕರ್ನಾಟಕ ರಾಜ್ಯಪತ್ರದ ಭಾಗ 4 (ಎ) ರಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಇದರಿಂದ ಬಾಧಿತರಾಗುವ, ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆ ಮತ್ತು ಸಲಹೆಗಳನ್ನು ಆಹ್ವಾನಿಸಲು, ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ.

ದಿನಾಂಕ:24.07.2025 ರಲ್ಲಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಿರುವ ಸದರಿ ಕರಡು ನಿಯಮಗಳಿಗೆ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆ / ಸಲಹೆಗಳು ಸರ್ಕಾರದಲ್ಲಿ ಸ್ವೀಕೃತವಾಗದೇ ಇರುವುದರಿಂದ;

ಈಗ, ಕರ್ನಾಟಕ ಸರ್ಕಾರವು, 1983 ರ ಕರ್ನಾಟಕ ಶಿಕ್ಷಣ ಕಾಯ್ದೆಯ (1995ರ ಕರ್ನಾಟಕ ಕಾಯ್ದೆ-1) ಸೆಕ್ಷನ್ 7ರ ಉಪವಿಭಾಗ (1) ರ ಷರತ್ತು (i) ಮತ್ತು ಸೆಕ್ಷನ್ 145 ರ ಮೂಲಕ ಪದತ್ತವಾದ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸಿರುತ್ತದೆ. ಎಂದರೆ:-

## ನಿಯಮಗಳು

1. **ಶೀರ್ಷಿಕೆ, ಪ್ರಾರಂಭ ಮತ್ತು ಅನ್ವಯಿಸುವಿಕೆ**:- (1) ಈ ನಿಯಮಗಳನ್ನು ಕರ್ನಾಟಕ ಪದವಿ ಪೂರ್ವ ಪರೀಕ್ಷೆ (ಮೌಲ್ಯಮಾಪನ ವಿಧಾನ) ನಿಯಮಗಳು, 2025 ಎಂದು ಕರೆಯತಕ್ಕದ್ದು.

(2) ಅಧಿಕೃತ ಗೆಜೆಟ್‌ನಲ್ಲಿ ಅವುಗಳ ಅಂತಿಮ ಪ್ರಕಟಣೆಯ ದಿನಾಂಕದಿಂದ ಅವು ಜಾರಿಗೆ ಬರುತ್ತವೆ.

(3) ಈ ನಿಯಮಗಳು 2025-26ನೇ ಶೈಕ್ಷಣಿಕ ವರ್ಷದಿಂದ ಮತ್ತು ನಂತರದ ಶೈಕ್ಷಣಿಕ ವರ್ಷದಿಂದ ಮಂಡಳಿಯ ಪರೀಕ್ಷೆಗೆ ಹಾಜರಾಗುವ ಎಲ್ಲಾ ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಅನ್ವಯಿಸುತ್ತವೆ.

2. **ಕನಿಷ್ಠ ಉತ್ತೀರ್ಣ ಶೇಕಡಾವಾರು**: - ಕನಿಷ್ಠ ಉತ್ತೀರ್ಣ ಶೇಕಡಾವಾರು ಪ್ರಮಾಣವನ್ನು ಈ ಕೆಳಗಿನಂತೆ ನಿಯಂತ್ರಿಸಲಾಗುತ್ತದೆ, ಅವುಗಳೆಂದರೆ: -

(ಎ) ಅಭ್ಯರ್ಥಿಯು ಪ್ರತಿ ವಿಷಯದಲ್ಲಿ ಲಿಖಿತ ಪರೀಕ್ಷೆ ಮತ್ತು ಆಂತರಿಕ ಮೌಲ್ಯಮಾಪನ ಅಥವಾ ಪ್ರಾಯೋಗಿಕ ಪರೀಕ್ಷೆಯಲ್ಲಿ ಪಡೆದ ಅಂಕಗಳನ್ನು ಒಳಗೊಂಡಂತೆ ಪ್ರತಿ ವಿಷಯದ ಒಟ್ಟು ಅಂಕಗಳಲ್ಲಿ ಕನಿಷ್ಠ 30% ಅಂಕಗಳನ್ನು ಪಡೆದಲ್ಲಿ ಹಾಗೂ ಎಲ್ಲಾ ವಿಷಯಗಳಲ್ಲಿ ಒಟ್ಟಾರೆಯಾಗಿ 33% ಅಂಕಗಳನ್ನು ಪಡೆದಲ್ಲಿ ಅಂತಹ ಅಭ್ಯರ್ಥಿಯನ್ನು ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆಂದು ಘೋಷಿಸಲಾಗುತ್ತದೆ.

(ಬಿ) ಯಾವುದೇ ಪ್ರಾಯೋಗಿಕ ಪರೀಕ್ಷೆ ಅಥವಾ ಆಂತರಿಕ ಮೌಲ್ಯಮಾಪನವಿಲ್ಲದ ವಿಷಯಗಳಲ್ಲಿ, 80 ಅಂಕಗಳ ಲಿಖಿತ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದಾರೆಂದು ಘೋಷಿಸಲು, ಅಭ್ಯರ್ಥಿಯು ಅಂತಹ ಪ್ರತಿಯೊಂದು ವಿಷಯದಲ್ಲಿ ಕನಿಷ್ಠ 24 ಅಂಕಗಳನ್ನು ಪಡೆಯಬೇಕಾಗುತ್ತದೆ:

ಆದರೆ, ಈ ಕನಿಷ್ಠ ಅಂಕಗಳನ್ನು ಅಸಾಧಾರಣ ಸಂದರ್ಭಗಳಲ್ಲಿ ಮತ್ತು ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದ ಷರತ್ತುಗಳಿಗೆ ಒಳಪಟ್ಟು ಸಡಿಲಿಸಬಹುದು ಅಥವಾ ಮಾರ್ಪಡಿಸಬಹುದು.

(ಸಿ) ಪ್ರಾಯೋಗಿಕ ಪರೀಕ್ಷೆ ಅಥವಾ ಆಂತರಿಕ ಮೌಲ್ಯಮಾಪನ ಇರುವ ವಿಷಯಗಳಲ್ಲಿ, 70 ಅಂಕಗಳ ಲಿಖಿತ ಪರೀಕ್ಷೆಯಲ್ಲಿ ಉತ್ತೀರ್ಣರಾಗಲು, ಅಭ್ಯರ್ಥಿಯು ಅಂತಹ ಪ್ರತಿಯೊಂದು ವಿಷಯದಲ್ಲೂ ಕನಿಷ್ಠ 21 ಅಂಕಗಳನ್ನು ಪಡೆಯಬೇಕು:

ಆದರೆ, ಈ ಕನಿಷ್ಠ ಅಂಕಗಳನ್ನು ಅಸಾಧಾರಣ ಸಂದರ್ಭಗಳಲ್ಲಿ ಮತ್ತು ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದ ಷರತ್ತುಗಳಿಗೆ ಒಳಪಟ್ಟು ಸಡಿಲಿಸಬಹುದು ಅಥವಾ ಮಾರ್ಪಡಿಸಬಹುದು.

3. **ಪ್ರಾಯೋಗಿಕ ಪರೀಕ್ಷೆಗಳಿಗೆ ಸಾಮಾನ್ಯ ಷರತ್ತುಗಳು**:- ಪ್ರಾಯೋಗಿಕ ಅಂಶವನ್ನು ಹೊಂದಿರುವ ವಿಷಯಗಳಿಗೆ ಸಂಬಂಧಿಸಿದಂತೆ ಸಾಮಾನ್ಯ ಷರತ್ತುಗಳ ಪ್ರಕಾರ, ಪ್ರಾಯೋಗಿಕ ಪರೀಕ್ಷೆಗೆ ಅಸ್ತಿತ್ವದಲ್ಲಿರುವ 30 ಅಂಕಗಳ ಹಂಚಿಕೆಯಿಂದ ವಿಚಲನಗೊಂಡು, ಪ್ರಾಯೋಗಿಕ ಪರೀಕ್ಷೆಯನ್ನು ಗರಿಷ್ಠ 20 ಅಂಕಗಳಿಗೆ ನಡೆಸಲಾಗುವುದು ಮತ್ತು ಉಳಿದ 10 ಅಂಕಗಳನ್ನು ಈ ಕೆಳಗಿನ ಷರತ್ತುಗಳನ್ನು ಪೂರೈಸುವ ಅಭ್ಯರ್ಥಿಗೆ ನೀಡಲಾಗುತ್ತದೆ, ಅವುಗಳೆಂದರೆ

(ಎ) ಅಭ್ಯರ್ಥಿಯು ಪ್ರತಿ ವಿಷಯದಲ್ಲೂ (ತಾತ್ವಿಕ ಮತ್ತು ಪ್ರಾಯೋಗಿಕ ತರಗತಿಗಳು ಸೇರಿದಂತೆ) ಕನಿಷ್ಠ 75% ಹಾಜರಾತಿಯನ್ನು ಹೊಂದಿದಲ್ಲಿ, ಅಂತಹ ಅಭ್ಯರ್ಥಿಯು ಪ್ರಾಯೋಗಿಕ ಪರೀಕ್ಷೆಗೆ ಹಾಜರಾಗಲು ಅರ್ಹರಾಗುತ್ತಾರೆ;

(ಬಿ) ಅಭ್ಯರ್ಥಿಯು ಪ್ರತಿಯೊಂದು ಪ್ರಾಯೋಗಿಕ ವಿಷಯಕ್ಕೆ ನಿರ್ದಿಷ್ಟಪಡಿಸಿದ ಕನಿಷ್ಠ ಸಂಖ್ಯೆಯ ಪ್ರಯೋಗಗಳನ್ನು ನಿರ್ವಹಿಸಿರಬೇಕು.

(ಸಿ) ಅಭ್ಯರ್ಥಿಯು ಪ್ರಾಯೋಗಿಕ ದಾಖಲೆ ಪುಸ್ತಕಗಳಲ್ಲಿ ನಿರ್ವಹಿಸಿದ ಪ್ರಯೋಗಗಳನ್ನು ದಾಖಲಿಸಿ ಅದನ್ನು ಸಂಬಂಧಿಸಿದ ವಿಷಯದ ಉಪನ್ಯಾಸಕರಿಂದ ದೃಢೀಕರಿಸಿ ಸಲ್ಲಿಸಿರಬೇಕು; ಮತ್ತು

(ಡಿ) ಅಭ್ಯರ್ಥಿಯು ಪ್ರಾಯೋಗಿಕ ಪರೀಕ್ಷೆಗೆ ಹಾಜರಾಗಿರಬೇಕು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

15/10/25

**(ಎಸ್. ಪ್ರಕಾಶ)**
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರೌಢ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

**GOVERNMENT OF KARNATAKA**

No: EP 244 SLB 2025

Karnataka Government Secretariat,
M.S. Building,
Bangalore, dated:15.10.2025

**NOTIFICATION**

Whereas the draft of the following rules which the Government of Karnataka proposes to make in exercise of the powers conferred by clause (i) of sub-section(1) of section 7 and section 145 of the Karnataka Education Act, 1983 (Karnataka Act 1 of 1995) is hereby published as required by sub-section (1) of section 145 of the said Act, for the information of all the persons likely to be affected thereby and notice is hereby given that the said draft amendments was Published as in Notification No. EP 244 SLB 2025, dated:24.07.2025 in part of IVA of the Karnataka Gazette dated:24.07.2025 inviting objections and suggestions from all persons likely to be affected thereby within fifteen days from the date of its publications in the Official Gazette.

And whereas the said Gazette was made available to public on 24.07.2025 and whereas no objections and suggestions have been received by the Government.

Now, therefore, in exercise of the powers conferred by clause (i) of sub-section(1) of section 7 and section 145 of the Karnataka Education Act, 1983 (Karnataka Act 1 of 1995) the Government of Karnataka hereby make the following rules, namely:-

**RULES**

**1. Title, commencement and applicability**:- (1) These rules may be called the Karnataka Pre-University Examination (Scheme of Evaluation) Rules, 2025.

(2) They shall come into force from the date of their final publication in the Official Gazette.

(3) These rules shall apply to all II PUC students appearing for the Board Examination from the academic year 2025-26 and onwards.

**2. Minimum Pass Percentage:-** The Minimum pass percentage shall be governed as follows, namely:-

(a) A candidate shall be declared to have passed the PUC examination if the candidate secures not less than 30% of the total marks in each subject, including marks obtained in the written examination and internal assessment or practical examination and not less than 33% of the aggregate marks across all subjects taken together.

(b) In subjects with no practical examination or internal assessment in order to be declared as having passed the written examination of 80 marks a candidate shall be required to secures a minimum of 24 marks in each such subject:

Provided that, this minimum marks may be relaxed or modified, under exceptional circumstances and subject to such conditions as may be specified by the State Government.

(c) In subjects with a practical examination or internal assessment, in order to be declared as having passed the written examination of 70 marks, a candidate shall secures a minimum of 21 marks in each such subject:

Provided that, this minimum marks may be relaxed or modified requirement may, under exceptional circumstances and subject to such conditions as may be specified by the State Government

**3. General conditions for practical examinations:-** The general conditions in respect of subjects with a practical component, in deviation from the existing allotment of 30 marks for the practical examination, the practical exam shall be conducted for a maximum of 20 marks and the remaining 10 marks shall be awarded to a candidate who fulfils the following conditions namely:

(a) the candidate has secured a minimum of 75% attendance in each subject (including theory and practical classes), thereby becoming eligible to appear for the practical exam;

(b) the candidate has conducted the minimum number of practicals specified for each practical subject,

(c) the candidate has duly recorded and submitted the same in the practical record book duly certified by the concerned subject lecturer; and

(d) the candidate has appeared for the practical examination.

By order and in the name of
Governor of Karnataka,

15/10/25

**(S. PRAKASHA)**
Under Secretary to Government
(Secondary)
Department of School Education and Literacy